50 48

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ ಬೆಂಗಳೂರು-560 003**

ಸಂ: ಎ2/ಮಾ.ಪ್ರ.ಪ.ಸಭೆ ನಡವಳಿ/ಡಿಕ್ರಿ ಅನುಷ್ಠಾನ/30/19-20 ದಿನಾಂಕ:03.02.2020

**ಸುತ್ತೋಲೆ**

ವಿಷಯ: ವಿದ್ಯಾರ್ಥಿಗಳ ಜನ್ಮ ದಿನಾಂಕ ತಿದ್ದುಪಡಿಗೆ ಸಂಬಂಧಿಸಿದಂತೆ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ),ರವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡಾವಳಿ ಸಂಬಂಧ ಕ್ರಮ ವಹಿಸುವ ಕುರಿತು.

ಉಲ್ಲೇಖ: 1.ದಿನಾಂಕ 18.01.2020 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ)ರವರ ಅಧ್ಯಕ್ಷತೆಯಲ್ಲಿ ನಡೆದ ಡಿಸೆಂಬರ್2019ರ ಮಾಹೆಯ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ನಡಾವಳಿ ಸಂಖ್ಯೆ:ಇಪಿ 06ಎಂಪಿಇ 2019. ದಿನಾಂಕ:21.01.2020.
2.ಮಂಡಳಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ:08.01.2020.
3 ಸರ್ಕಾರಿ ಸುತ್ತೋಲೆ ಆದೇಶ ಪತ್ರ ಸಂಖ್ಯೆ:ಇಡಿ 100 ಡಿಟಿಬಿ 2014 ದಿನಾಂಕ:26-10-2015.

******

ದಿನಾಂಕ 18.01.2020 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ),ರವರ ಅಧ್ಯಕ್ಷತೆಯಲ್ಲಿ ಜರುಗಿದ ಡಿಸೆಂಬರ್-2019 ರ ಮಾಹೆಯ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ನಡಾವಳಿ ಸಂಖ್ಯೆ:ಇಪಿ 06 ಎಂಪಿಇ 2019,ದಿನಾಂಕ:21.01.2020 ರಲ್ಲಿ ವಿದ್ಯಾರ್ಥಿಗಳ ಜನ್ಮ ದಿನಾಂಕ ತಿದ್ದುಪಡಿಗೆ ಸಂಬಂಧಿಸಿದಂತೆ ಕ್ರಮವಹಿಸುವ ಕುರಿತು ಸೂಚಿಸಲಾಗಿರುತ್ತದೆ. ಅರ್ಜಿದಾರರು ನ್ಯಾಯಾಲಯದಿಂದ ಡಿಕ್ರಿ ಪಡೆದು ಹುಟ್ಟಿದ ದಿನಾಂಕವನ್ನು ಬದಲಾವಣೆ ಮಾಡಿಕೊಳ್ಳುತ್ತಿದ್ದು, ಸದರಿ ಪ್ರಕರಣಗಳಲ್ಲಿ ಜನ್ಮ ದಿನಾಂಕವನ್ನು 15 ವರ್ಷಕ್ಕಿಂತ ಕಡಿಮೆ ತೋರಿಸಿದಲ್ಲಿ ಅಂತಹ ಪ್ರಕರಣಗಳನ್ನು ಸಂಬಂಧಪಟ್ಟವರಿಂದ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಗೆ ಪರಿಶೀಲನೆಗಾಗಿ ಕಳುಹಿಸಿ, ಪರಿಶೀಲನೆ ನಂತರ ಮುಂದಿನ ಕ್ರಮ ಜರುಗಿಸಲು ಹಾಗೂ ಅಗತ್ಯವಿದ್ದಲ್ಲಿ ಸರ್ಕಾರದ ಪರವಾಗಿ ಮೇಲ್ಮನವಿ ಸಲ್ಲಿಸುವ ಸಂಬಂಧ ಅಗತ್ಯ ಕ್ರಮವಹಿಸಲು ಆದೇಶಿಸಿರುತ್ತಾರೆ.

ಉಲ್ಲೇಖ 3 ರ ಸರ್ಕಾರಿ ಆದೇಶದಂತೆ ಹಾಗೂ ಉಲ್ಲೇಖಿತ ನಡಾವಳಿಯಂತೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರು, ಅರ್ಜಿದಾರರ ಜನ್ಮ ದಿನಾಂಕ ತಿದ್ದುಪಡಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಜನ್ಮ ದಿನಾಂಕವನ್ನು 15 ವರ್ಷಕ್ಕಿಂತ ಕಡಿಮೆ ತೋರಿಸಿದಲ್ಲಿ ಅಂತಹ ಪ್ರಕರಣಗಳನ್ನು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಗೆ ಪರಿಶೀಲನೆಗಾಗಿ ಕಳುಹಿಸಿ, ಪರಿಶೀಲನೆ ನಂತರ ಮುಂದಿನ ಕ್ರಮ ಜರುಗಿಸಲು ಹಾಗೂ ಅಗತ್ಯವಿದ್ದಲ್ಲಿ ಸರ್ಕಾರದ ಪರವಾಗಿ ಮೇಲ್ಮನವಿ ಸಲ್ಲಿಸುವ ಸಂಬಂಧ ಅಗತ್ಯ ಕ್ರಮವಹಿಸಲು ತಿಳಿಸಿದೆ.

(ವಿ.ಸುಮಂಗಲ)
ನಿರ್ದೇಶಕರು (ಪರೀಕ್ಷೆಗಳು)

ರವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ),
ಸಾರ್ವಜನಿಕ ಶಿಕ್ಷಣ ಇಲಾಖೆ.

ಪ್ರತಿಗಳನ್ನು:
1.ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ),ರವರ ದಯಾಪರ ಅವಗಾಹನೆ ಸಲ್ಲಿಸಿದೆ.
2.ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
3.ವಿಭಾಗೀಯ ಜಂಟಿ ನಿರ್ದೇಶಕರು, ಮೈಸೂರು, ಕಲಬುರಗಿ ಹಾಗೂ ಬೆಳಗಾವಿ, ರವರಿಗೆ ಮಾಹಿತಿಗಾಗಿ.
4.ಕಛೇರಿ ಪ್ರತಿ.

ಕರ್ನಾಟಕ ಪ್ರೌಢ ಶಿಕ್ಷಣ ಪರೀಕಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ ಬೆಂಗಳೂರು-560 003

ದಿನಾಂಕ:08.01.2020

ಸಂಖ್ಯೆ: ಎ2/ಮಾ.ಪ್ರ.ಪ.ಸಭೆ ನಡವಳಿ/ಡಿಕ್ರಿ ಅನುಷ್ಠಾನ/30/19-20

**ಸುತ್ತೋಲೆ**

ವಿಷಯ: ಜನ್ಮ ದಿನಾಂಕ ತಿದ್ದುಪಡಿಗೆ ಸಂಬಂಧಿಸಿದಂತೆ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ),ರವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡಾವಳಿ ಸಂಬಂಧ ಕ್ರಮ ವಹಿಸುವ ಕುರಿತು.

ಉಲ್ಲೇಖ: 1. ದಿನಾಂಕ 17.12.2019 ರಂದು ನಡೆದ ನವೆಂಬರ್-2019 ರ ಮಾಹೆಯ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ನಡಾವಳಿಸಂಖ್ಯೆ:ಇಪಿ06 ಎಂಪಿಇ 2019. ದಿನಾಂಕ:01.01.2019.

2. ಸರ್ಕಾರಿ ಸುತ್ತೋಲೆ ಆದೇಶ ಪತ್ರ ಸಂಖ್ಯೆ:ಇಡಿ 100 ಡಿಟಿಬಿ 2014 ದಿನಾಂಕ:26-10-2015.

******

ದಿನಾಂಕ 17.12.2019 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ರವರ ಅಧ್ಯಕ್ಷತೆಯಲ್ಲಿ ಜರುಗಿದ ನವೆಂಬರ್-2019 ರ ಮಾಹೆಯ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ನಡಾವಳಿ ಸಂಖ್ಯೆ: ಇಪಿ 06 ಎಂಪಿಇ 2019. ದಿನಾಂಕ: 01.01.2019 ರಲ್ಲಿ ವಿದ್ಯಾರ್ಥಿಗಳ ಜನ್ಮ ದಿನಾಂಕ ತಿದ್ದುಪಡಿಗೆ ಸಂಬಂಧಿಸಿದಂತೆ ಕ್ರಮವಹಿಸುವ ಕುರಿತು ಸೂಚಿಸಲಾಗಿರುತ್ತದೆ. ಅರ್ಜಿದಾರರು ನ್ಯಾಯಾಲಯದಿಂದ ಡಿಕ್ರಿ ಪಡೆದು ಹುಟ್ಟಿದ ದಿನಾಂಕವನ್ನು ಬದಲಾವಣೆ ಮಾಡಿಕೊಳ್ಳುತ್ತಿದ್ದು, ಸದರಿ ಪ್ರಕರಣಗಳಲ್ಲಿ ಪೂರ್ತಿ ಪರಿಶೀಲನೆ ಮಾಡಿದ ನಂತರ ಮುಂದಿನ ಕ್ರಮ ಜರುಗಿಸಬೇಕೆಂದು ಹಾಗೂ ಡಿಕ್ರಿ ಪಡೆದ ಪ್ರಕರಣಗಳಿಗೆ ಸರ್ಕಾರದ ಪರವಾಗಿ ಮೇಲ್ಮನವಿ ಸಲ್ಲಿಸಲು ಕ್ರಮವಹಿಸಲು ಆದೇಶಿಸಿರುತ್ತಾರೆ.

ಉಲ್ಲೇಖ 2 ರ ಸರ್ಕಾರಿ ಆದೇಶದಂತೆ ಹಾಗೂ ಉಲ್ಲೇಖಿತ ನಡಾವಳಿಯಂತೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರು, ಅರ್ಜಿದಾರರ ಜನ್ಮ ದಿನಾಂಕ ತಿದ್ದುಪಡಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಘನ ನ್ಯಾಯಾಲಯದ ಆದೇಶವನ್ನು ಕೂಲಂಕುಷವಾಗಿ ಪರಿಶೀಲಿಸಿ ಅರ್ಹ ಮತ್ತು ಒಪ್ಪಬಹುದಾದ ಪ್ರಕರಣಗಳಲ್ಲಿ ಮಾತ್ರ ಡಿಕ್ರಿ ಆದೇಶವನ್ನು ಅನುಷ್ಠಾನಗೊಳಿಸತಕ್ಕದ್ದು. ವಿವಾದವುಂಟಾಗಬಹುದಾದ ವಿಶೇಷ ಪ್ರಕರಣಗಳು ಕಂಡು ಬಂದಲ್ಲಿ , ಅಂತಹ ಪ್ರಕರಣಗಳಿಗೆ ಸರ್ಕಾರದ ಪರವಾಗಿ ನ್ಯಾಯಾಲಯಗಳಲ್ಲಿ ಮೇಲ್ಮನವಿ ಸಲ್ಲಿಸಲು ಕ್ರಮವಹಿಸುವಂತೆ ತಿಳಿಸಿದೆ.

23/1/20

(ವಿ.ಸುಮಂಗಲ)
ನಿರ್ದೇಶಕರು (ಪರೀಕ್ಷೆಗಳು) 1/2020

ಪ್ರತಿಗಳನ್ನು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
3. ವಿಭಾಗೀಯ ಜಂಟಿ ನಿರ್ದೇಶಕರು, ಮೈಸೂರು, ಕಲಬುರಗಿ ಹಾಗೂ ಬೆಳಗಾವಿ, ರವರಿಗೆ ಮಾಹಿತಿಗಾಗಿ.
4. ಕಛೇರಿ ಪ್ರತಿ.